Inward No. 17
Date
Sign.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅದ್ಯಶ್ರೀ ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆ, ಸಂಕೇಶ್ವರ ಇವರಿಗೆ ಸಂಕೇಶ್ವರದಲ್ಲಿ ಹೋಮಿಯೋಪತಿ ಮೆಡಿಕಲ್ ಕಾಲೇಜು ಪ್ರಾರಂಭಿಸಲು ಸಂಯೋಜನೆ ಮಂಜೂರಾತಿ ಕುರಿತು ಆದೇಶ.

ಓದಲಾಗಿದೆ: ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದ ಕುಲಸಚಿವರ ಪತ್ರ ಸಂಖ್ಯೆ:ಕವಿ:ವಿವಿಂ (ಸಂಯೋಜನೆ):91–92:334 ದಿನಾಂಕ 23–4–92.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ 23–4–92ರ ಪತ್ರದಲ್ಲಿ ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇವರು ಅದ್ಯಶ್ರೀ ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆ, ಸಂಕೇಶ್ವರ ಇದಕ್ಕೆ 1992–93ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಸಂಕೇಶ್ವರದಲ್ಲಿ ಹೊಸ ಹೋಮಿಯೋಪತಿ ಮೆಡಿಕಲ್ ಕಾಲೇಜು ಪ್ರಾರಂಭಿಸಲು ಅನುಮತಿ ಕೋರಿ ಸಲ್ಲಿಸಿರುವ ಅರ್ಜಿಯನ್ನು, ಸದರಿ ಸಂಸ್ಥೆಗೆ 25 ಪ್ರವೇಶ ಸಂಖ್ಯೆಯೊಂದಿಗೆ ಅನುಮತಿಸಬಹುದೆಂಬ ಶಿಫಾರಸ್ಸಿನೊಂದಿಗೆ ಕಳುಹಿಸಿ ಕೊಡುತ್ತಾ, ಸರ್ಕಾರದ ಮಂಜೂರಾತಿ ಕೋರಿರುತ್ತಾರೆ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 322 ಪಿಐಎಂ 92, ಬೆಂಗಳೂರು, ದಿನಾಂಕ:8–7–1992.**

ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡರವರ ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ, ಕರ್ನಾಟಕ ರಾಜ್ಯದ ವಿಶ್ವವಿದ್ಯಾನಿಲಯಗಳ ಕಾಯ್ದೆ 1976ರ ಪ್ರಕರಣ 53(5)ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, 1992–93ನೇ ಶೈಕ್ಷಣಿಕ ವರ್ಷದಿಂದ 25 (ಇಪ್ಪತ್ತೈದು) ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಸಾಮರ್ಥ್ಯದೊಂದಿಗೆ ಸಂಕೇಶ್ವರದಲ್ಲಿ ಹೊಸ ಹೋಮಿಯೋಪತಿ ಮೆಡಿಕಲ್ ಕಾಲೇಜು ಪ್ರಾರಂಭಿಸಲು ಆದ್ಯಶ್ರೀ ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆ, ಸಂಕೇಶ್ವರ, ಇವರಿಗೆ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರವು ಸಂಯೋಜನೆ ಮಂಜೂರಾತಿ ನೀಡಿದೆ.

1) ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇವರು ಗೊತ್ತುಪಡಿಸುವ ಷರತ್ತುಗಳನ್ನು ಪೂರೈಸತಕ್ಕದ್ದು.

2) ಸಹಾಯಾನುದಾನ ಸಂಹಿತೆಯಡಿಯಲ್ಲಿ ಸರ್ಕಾರದಿಂದ ಅನುದಾನ ಕೇಳುವಂತಿಲ್ಲ.

3) ಕೇಂದ್ರೀಯ ಹೋಮಿಯೋಪತಿ ಪರಿಷತ್ತಿನ ಅನುಮೋದನೆ ಪಡೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಬಿ. ಪ್ರಸನ್ನಕುಮಾರ್
(ಬಿ.ಪ್ರಸನ್ನ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಗೆ,

1) ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2) ನಿರ್ದೇಶಕರು, ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ, ಬೆಂಗಳೂರು.
3) ಚೇರಮನ್, ಅದ್ಯಶ್ರೀ ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆ, ಸಂಕೇಶ್ವರ, ತಾ:ಹುಕ್ಕೇರಿ.
4) ನಡತ ಸಂಪುಟ ಶಾಖೆ (ಸಿ.436:92).
5) ಶಾಖಾ ರಕ್ಷಾ ಕಡತ:ಹೆಚ್ಚುವರಿ ಪ್ರತಿಗಳು.

Scanned by CamScanner

ವಿಷಯ: ಆದ್ಯ ಶ್ರೀ ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಎಸ್. ಬಿ. ಶಿರಕೋಳಿ ಹೋಮಿಯೋಪತಿ ಮೆಡಿಕಲ್ ಕಾಲೇಜು, ಸಂಕೇಶ್ವರ ಇಲ್ಲಿಗೆ ಡೆಡ್‌ಬಾಡಿ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ೧) ಪ್ರಾಚಾರ್ಯರು, ಆದ್ಯ ಶ್ರೀ ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಎಸ್. ಬಿ. ಶಿರಕೋಳಿ ಹೋಮಿಯೋಪತಿಕ್ ಮೆಡಿಕಲ್ ಕಾಲೇಜು, ಸಂಕೇಶ್ವರ ಇವರ ಮನವಿ ದಿನಾಂಕ: 12.10.2002.

೨) ಸರ್ಕಾರದ ಸುತ್ತೋಲೆ ಸಂಖ್ಯೆ: ಆಕುಕ 121 ಪಿಐಎಂ 84, ದಿನಾಂಕ: 26.6.1984 : 29.8.1985.

೩) ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ : ಭಾವೈಪ : 49 : ಅಭಿವೃದ್ಧಿ (3) : 2002-2003, ದಿನಾಂಕ: 27.3.2003 ಹಾಗೂ 27.10.2003.

೪) ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಂಇಎಸ್ (2): 57: 2002-2003, ದಿನಾಂಕ: 7.4.2003.

ಪ್ರಸ್ತಾವನೆ:

ಮೇಲೆ (೧)ರಲ್ಲಿ ಓದಲಾದ ಪ್ರಾಚಾರ್ಯರು, ಆದ್ಯ ಶ್ರೀ ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆ ಎಸ್.ಬಿ.ಶಿರಕೋಳಿ ಹೋಮಿಯೋಪತಿಕ್ ಮೆಡಿಕಲ್ ಕಾಲೇಜು, ಸಂಕೇಶ್ವರ ಇವರ ಪತ್ರ ದಿನಾಂಕ: 12.10.2002 ರಲ್ಲಿ ತಮ್ಮ ಸಂಸ್ಥೆಯ ಶಿರಕೋಳಿ ಹೋಮಿಯೋಪತಿಕ್ ವೈದ್ಯಕೀಯ ಮಹಾವಿದ್ಯಾಲಯದ ಮೊದಲನೇ ವರ್ಷದ ಬಿಹೆಚ್‌ಎಂಎಸ್ ಗೆ ವಿದ್ಯಾರ್ಥಿಗಳ ಅಭ್ಯಾಸ ಪ್ರಯೋಗಕ್ಕಾಗಿ ಡೆಡ್‌ಬಾಡಿ ಗಳನ್ನು ಕೆಎಲ್‌ಇ ಸಂಸ್ಥೆಯ ಜೆ.ಎನ್.ಮೆಡಿಕಲ್ ಕಾಲೇಜು, ಬೆಳಗಾಂ ಇವರಿಂದ ಪಡೆಯಲು ನಿರ್ದೇಶಿಸಬೇಕೆಂದು ಕೋರಿರುತ್ತಾರೆ.

ಮೇಲೆ (೨) ರಲ್ಲಿ ಓದಲಾದ ಸುತ್ತೋಲೆಯಂತೆ ರಾಜ್ಯದಲ್ಲಿನ ಖಾಸಗಿ ಮತ್ತು ಸರ್ಕಾರಿ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಶೈಕ್ಷಣಿಕ ಸಂಸ್ಥೆಗಳು ಬೋಧನೆಗಾಗಿ ಪ್ರತಿ ವರ್ಷ ಐದು ಮೃತ ದೇಹಗಳನ್ನು ಸಂಬಂಧಿಸಿದ ಜಿಲ್ಲಾ ಶಸ್ತ್ರ ಚಿಕಿತ್ಸಕರು ಮತ್ತು ಆಸ್ಪತ್ರೆಯ ಅಧೀಕ್ಷಕರಿಂದ ಪಡೆಯಲು ಅನುಮತಿಸಲಾಗಿದೆ.

ಮೇಲೆ (೩) ರಲ್ಲಿ ಓದಲಾದ ಪತ್ರಗಳಲ್ಲಿ ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ನಿರ್ದೇಶನಾಲಯ, ಬೆಂಗಳೂರು ಇವರು ಸರ್ಕಾರದ ಸುತ್ತೋಲೆ ಸಂಖ್ಯೆ: ಹೆಚ್‌ಎಫ್‌ಡಬ್ಲ್ಯು: 121 ಪಿಐಎಂ 84, ದಿನಾಂಕ: 29.8.1985 ರಂತೆ ಅಲೋಪತಿಕ್ ವೈದ್ಯಕೀಯ ವಿಭಾಗದಿಂದ ವಾರ್ಷಿಕ ಐದು (5) ಮರಣ ಹೊಂದಿದ ವ್ಯಕ್ತಿಗಳ ಶರೀರಗಳನ್ನು ಅನಾಟಮಿ ವಿಭಾಗಕ್ಕೆ ಪಡೆಯಬಹುದಾಗಿದೆ ಹಾಗೂ ಇವುಗಳನ್ನು ಜಿಲ್ಲಾ ಆರೋಗ್ಯ ಅಧಿಕಾರಿಗಳಿಂದ ಪಡೆಯಬಹುದಾಗಿದೆ ಎಂದು ತಿಳಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸೂಕ್ತ ಅನುಮತಿ ನೀಡಲು ಕೋರಿರುತ್ತಾರೆ.

ಮೇಲೆ (೪) ರಲ್ಲಿ ಓದಲಾದ ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು ಇವರ ಪತ್ರದಲ್ಲಿ ಆದ್ಯ ಶ್ರೀ. ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಎಸ್.ಬಿ.ಶಿರಕೋಳಿ ಹೋಮಿಯೋಪತಿಕ್ ಮೆಡಿಕಲ್ ಕಾಲೇಜು, ಸಂಕೇಶ್ವರ ಇವರಿಗೆ ಡೆಡ್‌ಬಾಡಿಯನ್ನು ಜೆ.ಎನ್.ಮೆಡಿಕಲ್ ಕಾಲೇಜ್ ಮತ್ತು ಜಿಲ್ಲಾ ಮುಖ್ಯ ವೈದ್ಯಾಧಿಕಾರಿಗಳು, ಬೆಳಗಾಂ ಇಲ್ಲಿಂದ ಪಡೆಯಲು ಸರ್ಕಾರದ ಅನುಮತಿ ನೀಡುವಂತೆ ಶಿಫಾರಸ್ಸು ಮಾಡಿರುತ್ತಾರೆ.

----೨

Scanned by CamScanner

ಈ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 268 ಪಿಟಿಡಿ 2004, ಬೆಂಗಳೂರು, ದಿನಾಂಕ: 8.4.2004.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ ಅಧ್ಯ ಶ್ರೀ. ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಎಸ್.ಬಿ.ಶಿರಕೋಳಿ ಹೋಮಿಯೋಪತಿಕ್ ವೈದ್ಯಕೀಯ ಕಾಲೇಜು, ಸಂಕೇಶ್ವರ, ಬೆಳಗಾಂ ಜಿಲ್ಲೆ ಇವರಿಗೆ ಮೃತ ಶರೀರಗಳನ್ನು ಜಿಲ್ಲಾ ಆಸ್ಪತ್ರೆ, ಬೆಳಗಾಂ ಇಲ್ಲಿಂದ ಪಡೆಯಲು ಸರ್ಕಾರವು ಅನುಮತಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚೋಮಾನಾಯಕ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಇವರಿಗೆ:

೧) ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ನಿರ್ದೇಶನಾಲಯ, ಧನ್ವಂತರಿ ರಸ್ತೆ, ಬೆಂಗಳೂರು-೫೬೦ ೦೦೯.
೨) ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು.
೩) ಪ್ರಾಂಶುಪಾಲರು, ಅಧ್ಯಶ್ರೀ. ನಿಜಲಿಂಗೇಶ್ವರ ಶಿಕ್ಷಣ ಸಂಸ್ಥೆ, ಎಸ್.ಬಿ.ಶಿರಕೋಳಿ ಹೋಮಿಯೋಪತಿಕ್ ವೈದ್ಯಕೀಯ ಕಾಲೇಜು, ಸಂಕೇಶ್ವರ- ೫೯೧೩೧೩
೪) ಜಿಲ್ಲಾ ಶಸ್ತ್ರ ಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ, ಬೆಳಗಾಂ.
೫) ಸೂಪರಿಂಟೆಂಡೆಂಟ್ ಆಫ್ ಪೋಲೀಸ್, ಬೆಳಗಾಂ ಜಿಲ್ಲೆ, ಬೆಳಗಾಂ.
೬) ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್, ಬೆಳಗಾಂ ಜಿಲ್ಲೆ, ಬೆಳಗಾಂ.
೭) ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇವರ ಆಪ್ತ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
೮) ಉಪಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
೯) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Scanned by CamScanner